## ಪ್ರಥಮ ದರ್ಜೆಯ ನ್ಯಾಯಿಕ ದಂಡಾಧಿಕಾರಿಗಳವರ ನ್ಯಾಯಾಲಯ..... ಚಿತ್ತಾಪೂರ

C.C No.408/2016
CW-02 PW-02

ಹೆಸರು : ರೇವಣಸಿದ್ದಪ್ಪಾ ಪಾಟೀಲ್

ತಂದೆ ಹೆಸರು : ಬಸವಂತರಾಯ

ವಯಸ್ಸು : 70 ವರ್ಷ

ಉದ್ಯೋಗ : ವ್ಯಾಪಾರ/ಒಕ್ಕಲುತನ

ವಾಸ ಸ್ಥಳ : ಹೇರೂರ (ಕೆ) ಗ್ರಾಮ

---

**ಪ್ರಮಾಣವಚನ ಭೋಧಿಲಾಯಿತು. ದಿಃ 15-11-2023**

**ಮುಖ್ಯ ವಿಚಾರಣೆಃ ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕರಿಂದ**

ನನಗೆ ಚಾಸಾಃ 03 ರವರ ಪರಿಚಯ ನನಗೆ ಇರುವುದಿಲ್ಲ. ಈ ಪ್ರಕರಣದ ಕುರಿತು ನನಗೆ ಯಾವುದೇ ಮಾಹಿತಿ ಇರುವುದಿಲ್ಲ.

ಸುಮಾರು 3-4 ವರ್ಷಗಳ ಹಿಂದೆ ಪೊಲೀಸರು ಒಂದು ದಾಖಲೆಗೆ ನನ್ನ ಸಹಿಯನ್ನು ಪಡೆದಿದ್ದರು. ಸಾಕ್ಷಿಯು ಘಟನಾ ಸ್ಥಳದ ಪಂಚನಾಮೆಯಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ-2 ಎಂದು ಸಾಕ್ಷಿಯ ಸಹಿಯನ್ನು ನಿಪಿ-2 (ಎ) ಎಂದು ಗುರುತಿಸಲಾಯಿತು. ಸಾಕ್ಷಿಯು ಮುಂದುವರೆದು, ಸದರಿ ಸಹಿಯನ್ನು ಮಲ್ಲಿಕಾರ್ಜುನ ಗುಡಿಯ ಒಳಗೆ ಮಾಡಿರುತ್ತೇನೆ ಎಂದು ನುಡಿಯುತ್ತಾರೆ. ನಿಪಿ-2 ರಲ್ಲಿ ಬರೆದಿರುವ ವಿಷಯಗಳು ನನಗೆ ಗೊತ್ತಿರುವುದಿಲ್ಲ.

ಪೊಲೀಸರು ನನ್ನ ಸಮಕ್ಷಮ ಯಾವುದೇ ಘಟನಾ ಸ್ಥಳದ ಪಂಚನಾಮೆ ಮಾಡಿರುವುದಿಲ್ಲ.

(ಮಾನ್ಯ ಸ ಸ ಅ ರವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀ ಸವಾಲಿಗೆ ಅನುಮತಿ ಕೋರಿದ್ದು ದಾಖಲೆಗಳನ್ನು ಪರಿಶೀಲಿಸಿ ಸದರಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲಿಗೆ ಅನುಮತಿ ನೀಡಲಾಯಿತು.)

**<u>ಪಾಟೀ ಸವಾಲುಃ ಸ.ಸ.ಅಭಿಯೋಜಕರವರಿಂದ</u>**

ದಿಃ 11-06-2016 ರಂದು ಸಂಜೆ 04.00 ರಿಂದ 05.00 ಗಂಟೆಯವರೆಗೆ ಪೊಲೀಸರು ನನ್ನ ಸಮಕ್ಷಮ ನಿಪಿ-2 ರಂತೆ ಪಂಚನಾಮೆ ಕ್ರಮವನ್ನು ಜರುಗಿಸಿರುತ್ತಾರೆ ಎಂದರೆ ಸರಿಯಲ್ಲ. ನಿಪಿ-2 ರಲ್ಲಿ ಬರೆದಿರುವ ವಿಷಯಗಳು ನನಗೆ ಗೊತ್ತಿರುತ್ತವೆ ಎಂದರೆ ಸರಿಯಲ್ಲ. ಆರೋಪಿಗಳಿಗೆ ಸಹಾಯ ಮಾಡಲು ನಾನು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**<u>ಪಾಟೀ ಸವಾಲುಃ ಆರೋಪಿಗಳ ಪರ ಶ್ರೀ.ಜಿ.ಎಸ್.ವಕೀಲರಿಂದ - ಏನು ಇಲ್ಲಾ</u>**

**ಮರು ವಿಚಾರಣೆ ಇಲ್ಲಾ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನಕ್ಕೆ ಬೆರಳಚ್ಚು ಮಾಡಲಾಯಿತು )

ಓ. ಹೇ ಕೇ.ಸರಿ ಇದೆ.

ಸಿವಿಲ್ & J.M.F.C ನ್ಯಾಯಾಧೀಶರು, ಚಿತ್ತಾಪೂರ.